ನಿಗದಿಮಾಡಿಟ್ಟುಕೊಂಡಿದ್ದೀರಿ, ಆ ಜಾಗ ಬೇಡವೆ? ಬೇಡದಿದ್ದರೆ ಈ ಜಾಗವನ್ನು ವಾಪಸ್ ಕೊಟ್ಟರೆ ಇತರೆ ಕೆಲಸಗಳಿಗೆ ಅನುಕೂಲವಾಗುತ್ತದೆಯೆಂದು ಕೇಳಿಕೊಳ್ಳುತ್ತೇನೆ.

ಶ್ರೀ ಕೆ.ಎಸ್. ಕೃಷ್ಣಾರೆಡ್ಡಿ :— ಮಾನ್ಯ ಅಧ್ಯಕ್ಷರೆ, ಪ್ರತಿಯೊಂದು ಶಾಸನಸಭಾ ಕ್ಷೇತ್ರಕ್ಕೆ ಮುರಾರ್ಜಿ ದೇಸಾಯಿ ಶಾಲೆಯನ್ನು ಕೊಡಲು ಸಾಧ್ಯವಾಗುವುದಿಲ್ಲ. ಪ್ರತಿ ಜಿಲ್ಲೆಗೆ ಎರಡರಂತೆ ಸುಮಾರು ನಲವತ್ತು ಇಂಥ ಶಾಲೆಗಳನ್ನು ನಾವು ಪ್ರಾರಂಭ ಮಾಡಿದ್ದೇವೆ. ಆ ಶಾಲೆ ಕೇವಲ ಕ್ಷೇತ್ರಕ್ಕೆ ಸೀಮಿತವಾಗಿರುವುದಿಲ್ಲ. ಜಿಲ್ಲಾಮಟ್ಟದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳ ಆಯ್ಕೆ ಪರೀಕ್ಷೆ ನಡೆಯುತ್ತದೆ, ಅದರಲ್ಲಿ ಜಿಲ್ಲೆಯ ಎಲ್ಲಾ ಕ್ಷೇತ್ರದವರೂ ಪಾಲುಗೊಳ್ಳುತ್ತಾರೆ. ಆದ್ದರಿಂದ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೂ ಇಂಥ ಶಾಲೆಗಳನ್ನು ಕಟ್ಟಲು ಸರ್ಕಾರದಿಂದ ಸಾಧ್ಯವಾಗುವುದಿಲ್ಲ. ನಾವೇನು ಮಾಗಡಿ ಕ್ಷೇತ್ರದಲ್ಲಿ ಹತ್ತು ಎಕರೆ ಜಾಗವನ್ನು ಇದಕ್ಕಾಗಿ ನಿಗದಿ ಮಾಡಿಟ್ಟುಕೊಂಡಿದ್ದೇವೆ ಅದನ್ನು ಮಾನ್ಯ ಸದಸ್ಯರು ಹೇಳಿದ ಹಾಗೆ ಜಿಲ್ಲಾಧಿಕಾರಿಯವರಿಗೆ ತಿಳಿಸಿ ವಾಪಸ್ ಕೊಡಿಸುತ್ತೇನೆ.

ಅಧ್ಯಕ್ಷರು :— ಇಲ್ಲಿಗೆ ಪ್ರಶ್ನೋತ್ತರಗಳು ಮುಕ್ತಾಯವಾಯಿತು.

(ಅ) ಚುಕ್ಕಿ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು)

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರು) :— ಮಾನ್ಯ ಅಧ್ಯಕ್ಷರೆ, ಚುಕ್ಕಿ ಗುರುತಿಲ್ಲದ ಪ್ರಶ್ನೆಗಳ ಮೂರನೇ ಪಟ್ಟಿಯಲ್ಲಿರುವ ಸಮೂಹದಲ್ಲಿನ ಒಟ್ಟು 45 ಪ್ರಶ್ನೆಗಳಲ್ಲಿ 37 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯು ಮುಂದಿಡುತ್ತೇನೆ.

ಬಳ್ಳಾರಿ ನಗರದಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳ ನಿರ್ಮಾಣ.

66(308) ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬಳ್ಳಾರಿ ನಗರದ ಜನಸಂಖ್ಯೆಗೆ ಅನುಗುಣವಾಗಿ ಕುಡಿಯುವ ನೀರನ್ನು ಸರಬರಾಜು ಮಾಡಲು ಆರು ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲು ಯೋಜನೆ ತಯಾರಿಸಲಾಗಿದೆಯೇ?

2. ಹಾಗಿದ್ದಲ್ಲಿ, ಇದಕ್ಕಾಗಿ ತಗಲುವ ಅಂದಾಜು ವೆಚ್ಚವೆಷ್ಟು?

3. ಈ ಯೋಜನೆಗೆ ಸರ್ಕಾರದ ಮಂಜೂರಾತಿ ನೀಡಿದೆಯೇ ಹಾಗಿದ್ದಲ್ಲಿ, ಇದನ್ನು ತ್ವರಿತವಾಗಿ ಕೈಗೊಳ್ಳಲಾಗುವುದೇ?

ಶ್ರೀ ಎಂ.ಎಸ್. ಪಾಟೀಲ್ (ನಗರಾಭಿವೃದ್ಧಿ ಸಚಿವರು) :—

1. ಹೌದು

ಬಳ್ಳಾರಿ ನಗರ ನೀರು ಸರಬರಾಜು ಅಭಿವೃದ್ಧಿ ಯೋಜನೆಯೊಂದನ್ನು ರೂ. 3350.00 ಲಕ್ಷಗಳಿಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿಯು ತಯಾರಿಸಿದೆ ಇದರಲ್ಲಿ 5 ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲು ಅವಕಾಶವಿದೆ.

2. ಐದು ಮೇಲ್ಪಟ್ಟದ ಜಲಸಂಗ್ರಹಾಗಾರಗಳ ಅಂದಾಜು ವೆಚ್ಚ ರೂ. 267.00 ಲಕ್ಷಗಳು.

3. ಇಲ್ಲ. ಕರ್ನಾಟಕ ಜಲ ಮಂಡಲಿಯಿಂದ ಪ್ರಸ್ತಾವನೆ ಬಂದ ನಂತರ ಪರಿಶೀಲಿಸಲಾಗುವುದು.

ಬಳ್ಳಾರಿ ನಗರಸಭೆಯನ್ನು ನಗರಪಾಲಿಕೆಯನ್ನಾಗಿ ಪರಿವರ್ತಿಸುವುದು.

68(310)ಶ್ರೀ ಅಲ್ಲಂ ವೀರಭದ್ರಪ್ಪ ಶಾಸಕರು (ಕುರುಗೋಡು) :— ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ನಗರದ ಜನಸಂಖ್ಯೆ 3 ಲಕ್ಷಕ್ಕೂ ಮೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಬಳ್ಳಾರಿ ನಗರಸಭೆಯನ್ನು ನಗರಪಾಲಿಕೆಯನ್ನಾಗಿ ಪರಿವರ್ತಿಸಲು ಸರ್ಕಾರ ಆದೇಶಿಸಿದೆಯೇ?

ಶ್ರೀ ಮೀರಾಜುದ್ದೀನ್ ಎಸ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಬಳ್ಳಾರಿ ನಗರಸಭೆಗೆ ಸರ್ಕಾರ ಬಿಡುಗಡೆ ಮಾಡಿರುವ ಹಣ.

69(316) ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು) :— ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1998-99 ರಲ್ಲಿ ಬಳ್ಳಾರಿ ನಗರಸಭೆಗೆ ಸರ್ಕಾರದ ಬಿಡುಗಡೆ ಮಾಡಿರುವ ಅನುದಾನ ಎಷ್ಟು?